ಡಾ॥ ರಾಜಕುಮಾರ್ ಅಧ್ಯಯನಪೀಠ

1428(1721); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ವರನಟ ಡಾ॥ ರಾಜಕುಮಾರ್ ರವರ ಹೆಸರಿನಲ್ಲಿ ಅಧ್ಯಯನ ಪೀಠವನ್ನು ಸ್ಥಾಪಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಅಧ್ಯಯನ ಪೀಠವನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ;

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ಇಲ್ಲ

ಆ) ಪರಿಶೀಲಿಸಲಾಗುವುದು.

ಉಚಿತ ಕಂಪ್ಯೂಟರ್ ಶಿಕ್ಷಣ

1430(1723); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ರಾಜ್ಯದಲ್ಲಿನ ಸರ್ಕಾರಿ ಪ್ರೌಢಶಾಲೆಗಳಲ್ಲಿ ಸರ್ಕಾರಿ ಹಾಗೂ ಅನುದಾನಿತ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಆ) ಈ ಹಿಂದೆ ಶಾಲೆಗಳಲ್ಲಿ ಉಚಿತ ಕಂಪ್ಯೂಟರ್ ಶಿಕ್ಷಣ ನೀಡುತ್ತಿದ್ದುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಸದರಿ ಶಾಲೆಗಳಲ್ಲಿ ಉಚಿತ ಕಂಪ್ಯೂಟರ್ ಶಿಕ್ಷಣವನ್ನು ಸ್ಥಗಿತಗೊಳಿಸಲಾಗಿದೆಯೇ;

ಈ) ಉಚಿತ ಕಂಪ್ಯೂಟರ್ ಶಿಕ್ಷಣ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ;

ಉ) ಹಾಗಿದ್ದಲ್ಲಿ, ಸದರಿ ಶಾಲಾ ಮಕ್ಕಳಿಗೆ ಕಂಪ್ಯೂಟರ್ ಶಿಕ್ಷಣವನ್ನು ನೀಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ಸರ್ಕಾರಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ 17,66,930 ಹಾಗೂ ಅನುದಾನಿತ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ 5,59,428

ಆ) ಬಂದಿದೆ.

ಇ) ಹೌದು.

ಈ) ಉಚಿತ ಕಂಪ್ಯೂಟರ್ ಶಿಕ್ಷಣ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಬದ್ಧವಾಗಿದೆ.

ಉ) ಕಂಪ್ಯೂಟರ್ ಶಿಕ್ಷಣವನ್ನು 2015–16ನೇ ಸಾಲಿನಿಂದ ಐಸಿಟಿ ಫೇಸ್–3 ಯೋಜನೆ ಅಡಿಯಲ್ಲಿ 1763 ಸರ್ಕಾರಿ ಪ್ರೌಢಶಾಲೆಗಳಲ್ಲಿ ಹಾಗೂ 2633 ಅನುದಾನಿತ ಪ್ರೌಢಶಾಲೆಗಳಲ್ಲಿ ಜಾರಿ ಮಾಡಲು ಆದೇಶ ನೀಡಿದ್ದು, ಶೀಘ್ರ ಕ್ರಮವಹಿಸಲಾಗುತ್ತಿದೆ.

ಕನ್ನಡ ಚಲನ ಚಿತ್ರಗಳಿಗೆ ಸಿನೆಮಾ ಮಂದಿರ

1431(1724); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ರಾಜ್ಯದಲ್ಲಿರುವ ಕನ್ನಡ ಸಿನಿಮಾ ಮಂದಿರಗಳ ಸಂಖ್ಯೆ ಎಷ್ಟು;

ಆ) ಬೆಂಗಳೂರು, ಮೈಸೂರು ಮುಂತಾದ ನಗರಗಳಲ್ಲಿ ಕನ್ನಡ ಚಿತ್ರಗಳನ್ನು ಪ್ರದರ್ಶಿಸಲು ಚಿತ್ರಮಂದಿರ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹೊಸ ಕನ್ನಡ ಚಿತ್ರಗಳನ್ನು 4–5 ದಿನಗಳಲ್ಲಿ ಬದಲಾಯಿಸಿ, ಬೇರೆ ಚಿತ್ರಗಳನ್ನು ಪ್ರದರ್ಶಿಸುತ್ತಿರುವುದು ನಿಜವಲ್ಲವೇ;

ಈ) ಹಾಗಿದ್ದಲ್ಲಿ, ಇದರಿಂದ ಕನ್ನಡ ಚಲನಚಿತ್ರೋದ್ಯಮಕ್ಕೆ ಧಕ್ಕೆಯಾದಂತಾಗುವುದಿಲ್ಲವೇ;